ಕಾಮಗಾರಿಗಳು ಪ್ರಗತಿಲ್ಲಿವೆ. ನೀರು ಸರಬರಾಜು ಯೋಜನೆಯನ್ನು ಚಾಲನೆಗೊಳಿಸಿದ ನಂತರ, ಒಳಚರಂಡಿ ಮಂಡಳಿಯು ಅಂದಾಜು ತಯಾರಿಸಿದ ನಂತರ ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಹಾಗೂ ಮೂಲಭತ್ಯೆಗೆ ಅನುಗುಣವಾಗಿ ಪರಿಶೀಲಿಸಲಾಗುವುದು.

3) ಕೊಳ್ಳೇಗಾಲ ಮತ್ತು ಯಳಂದೂರು ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನ ತೊಂದರೆ ಬಗ್ಗೆ.

ಪ್ರಶ್ನೆ ಸಂಖ್ಯೆ : (188) ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ)

ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಮತ್ತು ಬಸ್ತೀಪುರ ಗ್ರಾಮಗಳಲ್ಲದೇ ಯಳಂದೂರು ತಾಲ್ಲೂಕಿನ ಬಿಳಿಗಿರಿರಂಗನ ಬೆಟ್ಟದಪ್ರದೇಶಗಳಲ್ಲಿನ ವಿದ್ಯುತ್ ಸರಬರಾಜಿನಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ತೊಂದರೆಯನ್ನು ನಿವಾರಿಸಲು ಈ ಸ್ಥಳಗಳಲ್ಲಿ ಉಪ ವಿದ್ಯುತ್ ಕೇಂದ್ರಗಳನ್ನು ತೆರೆಯಲು ಕೋರಿಕೆ ಸಲ್ಲಿಸಿದಾಗ್ಯೂ ಇದುವರೆವಿಗೂ ಉಪವಿದ್ಯುತ್ ಕೇಂದ್ರಗಳನ್ನು ಪ್ರಾರಂಭಿಸದಿರಲು ಕಾರಣಗಳೇನು;

ಇ) ಮೇಲ್ಕಂಡ ಸ್ಥಳಗಳಲ್ಲಿ ಯಾವಾಗ ಈ ಕೇಂದ್ರಗಳನ್ನು ತೆರೆಯಲಾಗುವುದು?

ಶ್ರೀ ಹೆಚ್.ಡಿ.ರೇವಣ್ಣ ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು

ಅ) ಹೌದು.

ಆ) ಮತ್ತು ಇ) ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಗ್ರಾಮದಲ್ಲಿ ಒಂದು 66/11 ಕೆ.ವಿ. ವಿದ್ಯುತ್ ಉಪಕೇಂದ್ರದ ಸ್ಥಾಪನೆ ಬಗ್ಗೆ ಪ್ರಸ್ತಾಪನೆಯನ್ನು

ಕರ್ನಾಟ ವಿದ್ಯುತ್ ಪ್ರಸರ ನಿಗಮದ ತಾಂತ್ರಿಕ ಸಲಹಾ ಸಮತಿಯ ಅನುಮೋದನೆಗಾಗಿ ಸಲ್ಲಿಸಲಾಗುತ್ತಿದೆ. ಈ ಪ್ರಸ್ತಾಪನೆಗೆ ಕೆ.ವಿ.ಪ್ರ.ನಿ.ನಿ.ಯ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆ ದೊರೆತ ನಂತರ ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು.

ಕೊಳ್ಳೇಗಾಲ ತಾಲ್ಲೂಕಿನ ಬಸ್ತೀಪುರದಲ್ಲಿ ಹೊಸ ವಿದ್ಯುತ್ ವಿತರಣಾ ಕೇಂದ್ರದ ಸ್ಥಾಪನೆಗೆ ಯಾವುದೇ ಪ್ರಸ್ತಾವನೆ ಸದಸ್ಯಕ್ಕೆ ಇರುವುದಿಲ್ಲ. ಬಸ್ತೀಪುರ ಗ್ರಾಮಕ್ಕೆ ಹಾಲಿ ಕೊಳ್ಳೇಗಾಲ ಪಟ್ಟಣದ ಟೌನ್ ಫೀಡರ್‌ನಿಂದಲೇ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ವಿದ್ಯುತ್ ಸರಬರಾಜಿನಲ್ಲಿ ವೋಲ್ಟೇಜ್ ಗುಣಮಟ್ಟದ ಸುಧಾರಣೆಗಾಗಿ ಈ ಗ್ರಾಮದಲ್ಲಿ ಹಾಲಿ ಇರುವ ಒಂದು ವಿತರಣಾ ಟ್ರಾನ್ಸ್‌ಫಾರ್ಮರ್ ಜೊತೆಗೆ ಹೆಚ್ಚುವರಿಯಾಗಿ ಇನ್ನೊಂದು ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್‌ನ್ನು ಅಳವಡಿಸಲು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಯು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

ಯಳಂದೂರು ಪಟ್ಟಣದಲ್ಲಿ ಒಂದು 66/11 ಕೆ.ವಿ. 2 8 ಎಂ.ವಿ.ಎ. ಸಾಮರ್ಥ್ಯದ ವಿದ್ಯುತ್ ಉಪಕೇಂದ್ರವನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ನಿರ್ಮಾಣ ಮಾಡುತ್ತಿದೆ. ನಿರ್ಮಾಣ ಕಾರ್ಯವು ಈಗ ಪ್ರಗತಿಯಲ್ಲಿದೆ. ಅಕ್ಟೋಬರ್ 07 ರ ಅಂತ್ಯದ ವೇಳೆಗೆ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ. ಸದರೀ ವಿದ್ಯುತ್ ಉಪಕೇಂದ್ರವು ಕಾರ್ಯಾರಂಭ ಮಾಡಿದ ನಂತರ ಯಳಂದೂರು ತಾಲ್ಲೂಕಿನದ್ಯಂತ ವಿದ್ಯುತ್ ಸರಬರಾಜಿನ ಗುಣಮಟ್ಟದಲ್ಲಿ ಸುಧಾರಣೆ ಆಗಲಿದೆ. ಬಿಳಿಗಿರಿರಂಗನ ಬೆಟ್ಟ ಪ್ರದೇಶಕ್ಕೆ ಯಳಂದೂರು ಟೌನ್ ಫೀಡರ್‌ನಿಂದಲೇ ವಿದ್ಯುತ್ ಸರಬರಾಜು ಮಾಡಲಾಗುತ್ತಿದ್ದು, ಸದರಿ ಫೀಡರ್‌ನ ವಾಹಕಗಳನ್ನು ಹೆಚ್ಚಿನ ಗಾತ್ರದ ವಾಹಕಗಳ ಮೂಲಕ ಈಗಾಗಲೇ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿಯು ಬದಲಾಯಿಸಿರುತ್ತದೆ. ಅಲ್ಲದೇ ಬಿಳಿಗಿರಿರಂಗನ ಬಬೆಟ್ಟಕ್ಕೆ ಪ್ರತ್ಯೇಕ 11 ಕೆ.ವಿ. ಮಾರ್ಗವನ್ನು ಇರ್ಇಸುವ ಬಗ್ಗೆ ಪರಿಶೀಲನೆ ಮಾಡುತ್ತಿದೆ. ಆದುದರಿಂದ ಬಿಳಿಗಿರಿರಂಗನ ಬೆಟ್ಟದಲ್ಲಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಅವಶ್ಯಕತೆ ಸದ್ಯಕ್ಕೆ ಇರುವುದಿಲ್ಲ.